ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 4–8–2017

# ಪತ್ರಿಕಾ ಆಮಂತ್ರಣ

1. ಕರ್ನಾಟಕ ಲಲಿತಕಲಾ ಅಕಾಡೆಮಿ ಹಾಗೂ ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು ಇವರ ಸಹಯೋಗದಲ್ಲಿ "ಕಲೆ ಮತ್ತು ಸಹೃದಯತೆ" ಕುರಿತ ಕಲಾ ಶಿಬಿರ:

ಉದ್ಘಾಟನೆ:

ಡಾ. ಸಿ.ಎನ್. ಮಂಜುನಾಥ, ನಿರ್ದೇಶಕರು, ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು.

ಅತಿಥಿ:

ಪ್ರೊ: ಕೆ. ಇ. ರಾಧಾಕೃಷ್ಣ, ಸಾಹಿತಿಗಳು ಮತ್ತು ಶಿಕ್ಷಣ ತಜ್ಞರು,

ಅಧ್ಯಕ್ಷತೆ:

ಡಾ. ಎಂ.ಎಸ್. ಮೂರ್ತಿ, ಅಧ್ಯಕ್ಷರು, ಕರ್ನಾಟಕ ಲಲಿತಕಲಾ ಅಕಾಡೆಮಿ, ಬೆಂಗಳೂರು.

ದಿನಾಂಕ: 05–08–2017 ಶನಿವಾರ ಸಮಯ: ಬೆಳಿಗ್ಗೆ 11–00 ಗಂಟೆಗೆ

ಸ್ಥಳ: ಚಿನ್ನಯ್ಯ ಆಡಿಟೋರಿಯಂ, ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು.

2. **Inauguration of Child-Friendly Courts (Bengaluru Urban & Rural Districts)**

**<u>Presided By:</u>**

**Hon'ble Mr. Justice Madan B. Lokur, Judge, Supreme Court of India and Chairman, Juvenile Justice Committee.**

**<u>Presence of</u>**

**Hon'ble Mr. Justice Subhro Kamal Mukherjee, Chief Justice, High Court of Karnataka.**
**and**
**Hon'ble Mr. Justice Ashok B. Hinchigeri, Judge, High Court of Karnataka and Chairman, Juvenile Justice Committee**

**Date : 05-08-2017, Saturday, Time 2.00 PM**

**Place: City Civil Court Premises (5th Floor) Bengaluru.**

**ಸಂಖ್ಯೆ – 8/8**

**ಪತ್ರಿಕಾ ಪ್ರಕಟಣೆ**

## <u>ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ಸರ್ಕಾರಿ ನೌಕರರಿಗೆ ಹಿಂಬಡ್ತಿ ಇಲ್ಲ ಸುಗ್ರೀವಾಜ್ಞೆ ಮೂಲಕ ಹೊಸ ಕಾನೂನು – ಸಚಿವ ಕಾಗೋಡು ತಿಮ್ಮಪ್ಪ</u>

**ಬೆಂಗಳೂರು, ಆಗಸ್ಟ್ 4 (ಕರ್ನಾಟಕ ವಾರ್ತೆ)**

**ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಸರ್ಕಾರಿ ನೌಕರರ ನೇಮಕಾತಿ ಮತ್ತು ಬಡ್ತಿಯಲ್ಲಿ ಆಗಿರುವ ಲೋಪದೋಷಗಳನ್ನು ಸರಿಪಡಿಸಲು ಸುಗ್ರೀವಾಜ್ಞೆ ಮೂಲಕ ಹೊಸ ಕಾನೂನು**

ತರಲು ಸಂಪುಟ ಉಪ ಸಮಿತಿ ನಿರ್ಧರಿಸಿದೆ ಎಂದು ಕಂದಾಯ ಸಚಿವ ಕಾಗೋಡು ತಿಮ್ಮಪ್ಪ ಅವರು ತಿಳಿಸಿದರು.

ವಿಧಾನಸೌಧದಲ್ಲಿ ಇಂದು ಕಾನೂನು ಸಚಿವ ಟಿ.ಬಿ ಜಯಚಂದ್ರ ಅವರ ಅಧ್ಯಕ್ಷತೆಯಲ್ಲಿ ನಡೆದ ಸಂಪುಟದ ಉಪ ಸಮಿತಿಯ ಸಭೆಯಲ್ಲಿ ಕಾನೂನು ಇಲಾಖೆ ಪರಾಮರ್ಶೆ ಮಾಡಿರುವ ವರದಿಯನ್ನು ಪರಿಶೀಲಿಸಿ ಈ ತೀರ್ಮಾನ ಕೈಗೊಳ್ಳಲಾಯಿತು ಎಂದು ಸಚಿವರು ತಿಳಿಸಿದರು.

ಸುಪ್ರೀಂಕೋರ್ಟ್‌ನ ನಿರ್ದೇಶನದಂತೆ ಕೆಲವು ಇಲಾಖೆಗಳಲ್ಲಿ ಆಗಿರುವ ಲೋಪದೋಷಗಳನ್ನು ಸರಿಪಡಿಸಿ ಇನ್ನು ಮುಂದೆ ಬಡ್ತಿ ಮತ್ತು ನೇಮಕಾತಿ ಸಂದರ್ಭದಲ್ಲಿ ಮೀಸಲಾತಿ ಅನುಪಾತವನ್ನು ಮೀರದಂತೆ ಅಗತ್ಯಕ್ರಮ ಕೈಗೊಳ್ಳುವ ಕರಡನ್ನು ಸಂಪುಟ ಸಭೆ ಮುಂದೆ ಮಂಡಿಸಲು ಸಭೆ ನಿರ್ಧರಿಸಿತು ಎಂದು ಕಂದಾಯ ಸಚಿವರು ತಿಳಿಸಿದರು.

ಕೆಲವು ಇಲಾಖೆಗಳಲ್ಲಿ ಅಗತ್ಯಕ್ಕಿಂತ ಹೆಚ್ಚು ಮೀಸಲಾತಿ ನೀಡಿರುವ ಅಂಶವನ್ನು ಕಾನೂನು ಇಲಾಖೆ ಪರಾಮರ್ಶಿಸಿ ಸೂಕ್ತ ತಿದ್ದುಪಡಿಗೆ ಸಲಹೆಮಾಡಿರುವ ಹಿನ್ನೆಲೆಯಲ್ಲಿ ಸುಪ್ರೀಂಕೋರ್ಟ್‌ನ ಗಡುವು ಮೀರುವ ಮುನ್ನವೇ ಸುಗ್ರೀವಾಜ್ಞೆ ಮೂಲಕ ಹೊಸ ಕಾನೂನು ತರಲು ಉಪ ಸಮಿತಿ ಸಮ್ಮತಿಸಿದೆ.

ಇನ್ನು ಮುಂದೆ ಯಾವುದೇ ಇಲಾಖೆಗಳಲ್ಲಿ ನೇಮಕ ಮತ್ತು ಬಡ್ತಿ ಸಂದರ್ಭದಲ್ಲಿ ಮೀಸಲಾತಿ ಅನುಪಾತವನ್ನು ಉಲ್ಲಂಘನೆಯಾಗದಂತೆ ಅಗತ್ಯ ಕ್ರಮ ಕೈಗೊಳ್ಳಲು ಹೊಸ ಕಾನೂನಿನಿಲ್ಲಿ ಅವಕಾಶ ಕಲ್ಪಿಸಲಾಗುವುದು ಎಂದು ಸಚಿವರು ತಿಳಿಸಿದರು.

ಈಗಾಗಲೇ ಬಡ್ತಿ ಹೊಂದಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸರ್ಕಾರಿ ನೌಕರರನ್ನು ಹಿಂಬಡ್ತಿ ಮಾಡುವ ಉದ್ದೇಶ ಇಲ್ಲ ಎಂಬುವುದು ಹೊಸ ಕಾನೂನಿನಲ್ಲಿ ಅಡಕವಾಗಿರುತ್ತದೆ ಎಂದು ಸಚಿವರು ತಿಳಿಸಿದರು.

ಇನ್ನು ಮುಂದೆ ಎಲ್ಲಾ ಇಲಾಖೆಗಳ ನೇಮಕಾತಿ ಸಂದರ್ಭದಲ್ಲಿ ಮೀಸಲಾತಿ ಅನುಪತ ಉಲ್ಲಂಘನೆಯಾಗದಂತೆ ಕ್ರಮ ಜರುಗಿಸುವುದರ ಜೊತೆಗೆ ಬಡ್ತಿ ಸಂದರ್ಭದಲ್ಲೂ ಅದೇ ನಿಯಮವನ್ನು ಮುಂದುವರಿಸಲು ಹೊಸ ಕಾನೂನು ತರಲಾಗುತ್ತಿದೆ ಎಂದರು.

1500 ಬತ್ತಿದ ಕೆರೆಗಳನ್ನು ಪರಿಭಾರಿ (ಡಿನೋಟಿಫಿಕೇಷನ್) ಮಾಡುವ ಉದ್ದೇಶ ರಾಜ್ಯದ ಸರ್ಕಾರದ ಮುಂದೆ ಇಲ್ಲ ಎಂದು ಕಂದಾಯ ಸಚಿವ ಕಾಗೋಡು ತಿಮ್ಮಪ್ಪ ಸ್ಪಷ್ಟಪಡಿಸಿದರು.

ಬೆಂಗಳೂರು ನಗರದಲ್ಲಿ ಬತ್ತಿ ಹೋದ ಕೆರೆಗಳನ್ನು ಪರಭಾರಿ ಮಾಡಬೇಕೆಂಬ ಯಾವುದೇ ಪ್ರಸ್ತಾವನೆಯನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಯಾವುದೇ ಪ್ರಸ್ತಾವನೆ ಸಲ್ಲಿಸಿಲ್ಲ ಎಂದು ಅವರು ಹೇಳಿದರು.

ಮುಂಗಾರು ಕ್ಷೀಣ: ಬರ ಎದುರಿಸಲು ಸಿದ್ಧತೆ

ರಾಜ್ಯದಲ್ಲಿ ಜೂನ್ ಮತ್ತು ಜುಲೈ ತಿಂಗಳಲ್ಲಿ ಮಲೆನಾಡು ಮತ್ತು ದಕ್ಷಿಣ ಕರ್ನಾಟಕದಲ್ಲಿ ಮುಂಗಾರು ಕ್ಷೀಣಿಸಿದ್ದು ವಾಡಿಕೆಗಿಂತ ಶೇ 20 ರಿಂದ 30 ರಷ್ಟು ಮಳೆ ಕಡಿಮೆಯಾಗಿದೆ ಎಂದು ಆತಂಕದ ವಿಷಯವಾಗಿದ್ದರೂ ಈ ತಿಂಗಳ ಮತ್ತು ಮುಂದಿನ ತಿಂಗಳ ಮುಂಗಾರು ಚುರುಕುಗೊಳ್ಳುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಆದ್ಯಾಗ್ಯೂ ಜನರು ಮತ್ತು ಜಾನುವಾರುಗಳಿಗೆ ಕುಡಿಯುವ ನೀರು ಒದಗಿಸುವುದು ಹಾಗೂ ಗೋಶಾಲೆ ತೆರೆದು ಮೇವು ಬ್ಯಾಂಕ್ ಆರಂಭಿಸಲು ಜಿಲ್ಲಾಡಳಿತಕ್ಕೆ ಸೂಚನೆ ನೀಡಲಾಗಿದೆ ಎಂದು ಸಚಿವರು ತಿಳಿಸಿದರು.

ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿ ಮಾರ್ಗಸೂಚಿ ಬದಲಾವಣೆ ಮಾಡಿರುವುದರಿಂದ ರಾಜ್ಯಕ್ಕೆ ಬರಬೇಕಾದ ಪರಿಹಾರದಲ್ಲಿ ಶೇ 25 ರಿಂದ 30 ರಷ್ಟು ನೆರವು ಕಡಿಮೆಯಾಗುವ ಸಾಧ್ಯತೆ ಇದೆ. ಈ ಸಂಬಂಧ ಮುಖ್ಯಮಂತ್ರಿ ಅವರ ಅಧ್ಯಕ್ಷತೆಯಲ್ಲಿ ಸರ್ವಪಕ್ಷಗಳ ನಿಯೋಗವನ್ನು ಕೇಂದ್ರಕ್ಕೆ ಕೊಂಡೊಯ್ದು ಮನವಿ ಸಲ್ಲಿಸಲಾಗುವುದು ಎಂದರು.

ಮುಂಗಾರು ಮಳೆ ಕೊರತೆಯಿಂದಾಗಿ ತೋಟಗಾರಿಕೆ ಬೆಳಗಳಾದ ಅಡಿಕೆ, ತೆಂಗು ಉತ್ಪನ್ನಗಳು ಕುಸಿತವಾಗಿರುವ ಹಿನ್ನೆಲೆಯಲ್ಲಿ ಪ್ರತಿ ಎಕರೆಗೆ 30 ಸಾವಿರ ರೂ ಪರಿಹಾರ ನೀಡಬೇಕು ಎಂದು ರಾಜ್ಯದ ನಿಯೋಗ ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸಲಿದೆ ಎಂದು ಕಂದಾಯ ಸಚಿವ ಕಾಗೋಡು ತಿಮ್ಮಪ್ಪ ಅವರು ಹೇಳಿದರು.

ಎಸ್‌ಎಂ:ಕೆಪಿಪಿ:ಜಿಪಿಆರ್

9/9

# ಆಗಸ್ಟ್ 5 ರಂದು
# 'ಮಕ್ಕಳ ಸ್ನೇಹಿ ನ್ಯಾಯಾಲಯ' ಉದ್ಘಾಟನೆ

ಬೆಂಗಳೂರು, ಆಗಸ್ಟ್ 4 (ಕರ್ನಾಟಕ ವಾರ್ತೆ)

ಕರ್ನಾಟಕ ಉಚ್ಚ ನ್ಯಾಯಾಲಯ (ಬಾಲ ನ್ಯಾಯ ಸಮಿತಿ), ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಕೀಲರ ಸಂಘ, ಬೆಂಗಳೂರು ಇವರ ಸಹಯೋಗದಲ್ಲಿ

ಆಗಸ್ಟ್ 5 ರಂದು ಮಧ್ಯಾಹ್ನ 2.00 ಗಂಟೆಗೆ ಸಿಟಿ ಸಿವಿಲ್ ಕೋರ್ಟ್ ಆವರಣ, 5ನೇ ಮಹಡಿ, ಬೆಂಗಳೂರು ಇಲ್ಲಿ 'ಮಕ್ಕಳ ಸ್ನೇಹಿ ನ್ಯಾಯಾಲಯ' ಉದ್ಘಾಟನಾ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ.

ಸುಪ್ರೀಂಕೋರ್ಟ್ ನ್ಯಾಯಮೂರ್ತಿಗಳು ಮತ್ತು ಬಾಲ ನ್ಯಾಯ ಸಮಿತಿ ಅಧ್ಯಕ್ಷರಾದ ಗೌರವಾನ್ವಿತ ನ್ಯಾಯಮೂರ್ತಿ ಮದನ್ ಬಿ. ಲೋಕೂರು ಅವರು ಮಕ್ಕಳ ಸ್ನೇಹಿ ನ್ಯಾಯಾಲಯದ ಉದ್ಘಾಟನೆಯನ್ನು ನೆರವೇರಿಸಲಿದ್ದಾರೆ.

ಕರ್ನಾಟಕ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಸುಬ್ರೋ ಕಮಲ್ ಮುಖರ್ಜಿ ಮತ್ತು ಹೈಕೋರ್ಟ್‌ನ ನ್ಯಾಯಮೂರ್ತಿಗಳು ಮತ್ತು ಬಾಲ ನ್ಯಾಯ ಸಮಿತಿಯ ಅಧ್ಯಕ್ಷರಾದ ಅಶೋಕ್ ಬಿ. ಹಿಂಚಗೇರಿ ಅವರು ಸಮಾರಂಭದಲ್ಲಿ ಉಪಸ್ಥಿತರಿರುವರು.

ಮಕ್ಕಳ ಸ್ನೇಹಿ ನ್ಯಾಯಾಲಯವು ಬಾಲ ನ್ಯಾಯ ಸಮಿತಿಯ ಮಾರ್ಗಸೂಚಿಗಳನ್ವಯ ಸ್ಥಾಪಿಸಲಾಗಿದ್ದು, ನ್ಯಾಯಾಲಯಕ್ಕೆ ಬರುವ ಮಕ್ಕಳಿಗೆ ಎಲ್ಲಿಯೂ ಸಹ ನ್ಯಾಯಾಲಯವೆಂಬ ಭಯದ ವಾತಾವರಣ ನಿರ್ಮಾಣವಾಗದಂತೆ ಎಚ್ಚರ ವಹಿಸಲಾಗಿದೆ.

ನಿರೀಕ್ಷಣಾ ಕೊಠಡಿಗಳಲ್ಲಿ ಮಕ್ಕಳಿಗೆ ಆಡಲು ಆಟಿಕೆಗಳನ್ನು ಒದಗಿಸಲಾಗಿದ್ದು, ಅಡಿಗೆ ಮನೆ ಸೌಲಭ್ಯವನ್ನು ಸಹ ಬಾಧಿತ ಮಕ್ಕಳಿಗೆ (victims) ಒದಗಿಸಲಾಗುವುದು. ಬಾಲಾಪರಾಧಿಗಳು ಸಾಕ್ಷಿ ಹೇಳಲು ಬರುವಂತಹ ಮಕ್ಕಳು ಮತ್ತು ಆರೋಪಿ ಮಕ್ಕಳಿಗೆ ಪ್ರತ್ಯೇಕ ಪ್ರವೇಶ ದ್ವಾರಗಳನ್ನು ಕಲ್ಪಿಸಲಾಗಿದ್ದು, ಯಾವುದೇ ಭಯವಿಲ್ಲದಂತೆ ಪ್ರಕರಣವನ್ನು ಎದುರಿಸುವ ಮತ್ತು ಸಾಕ್ಷಿ ಹೇಳುವ ರೀತಿಯಲ್ಲಿ ವಿಟ್ನೆಸ್ ಬಾಕ್ಸ್ ಮತ್ತು ಡೆಕ್ ಬಾಕ್ಸ್‌ಗಳನ್ನು ಸಹ ನಿರ್ಮಿಸಲಾಗಿರುತ್ತದೆ.

ನ್ಯಾಯಾಲಯವು ಪೋಕ್ಸೋ ಕಾಯ್ದೆಗೆ ಅನುಗುಣವಾಗಿ ಕರ್ತವ್ಯ ನಿರ್ವಹಿಸಲಿದೆ.

ಎಸ್‌ಎಂ:ಎಂಆರ್‌ಎಂ:ಜಿಪಿಆರ್

ಸಂಖ್ಯೆ 10/10

## ಎಲೆಕ್ಟ್ರಿಕಲ್ ತರಬೇತಿ ಶಿಬಿರ ಮುಂದೂಡಿಕೆ

ಬೆಂಗಳೂರು, ಆಗಸ್ಟ್ 4 (ಕರ್ನಾಟಕ ವಾರ್ತೆ)

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಒಳಾಂಗಣ ಚಟವಟಿಕೆಯಡಿಯಲ್ಲಿ ಆಸಕ್ತ ಯುವಕ/ಯುವತಿಯರಿಗಾಗಿ ಉದ್ಯೋಗ ಒದಗಿಸಿಕೊಡುವ

ನಿಟ್ಟಿನಲ್ಲಿ 'ಎಲೆಕ್ಟ್ರಿಕಲ್ಸ್' ತರಬೇತಿ ಶಿಬಿರವನ್ನು ಆಗಸ್ಟ್ 7 ರಿಂದ 18 ರವರೆಗೆ ಬೆಂಗಳೂರಿನ ಕೋರಮಂಗಲ ಒಳಾಂಗಣ ಕ್ರೀಡಾಂಗಣದಲ್ಲಿ ಆಯೋಜಿಸಲು ನಿರ್ಧರಿಸಲಾಗಿತ್ತು. ಕಾರಣಾಂತರದಿಂದ ತರಬೇತಿಯನ್ನು ಮುಂದೂಡಲಾಗಿರುತ್ತದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ನಿರ್ದೇಶನಾಲಯದ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಕೆಪಿಪಿ:ಜಿಪಿಆರ್